ಹೆಲ್ಪ್‌ಲೈನ್/ Helpline : 080-25582559
ಈಮೇಲ್/ E-mail : contact@kspcb.gov.in
ವೆಬ್‌ಸೈಟ್/ Website : kspcb.karnataka.gov.in

080-25581383, 25589112
080-25589113, 25589114

# ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ
# Karnataka State Polution Control Board

"ಪರಿಸರ ಭವನ", 1 ರಿಂದ 5ನೇ ಮಹಡಿಗಳು, ನಂ.49, ಚರ್ಚ್ ಸ್ಟ್ರೀಟ್, ಬೆಂಗಳೂರು-560001, ಕರ್ನಾಟಕ ರಾಜ್ಯ, ಭಾರತ
"Parisara Bhavan", 1st to 5th Floor, # 49, Church Street, Bangalore - 560 001, Karnataka State, India

ಸಂಖ್ಯೆ:ಮಾನಿಮಂ/ಜಾ.ಕೋ/2022-23/ 3310 ದಿನಾಂಕ 11 AUG 2022

**ದಿನಾಂಕ 28/06/2022 ರಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, 3ನೇ ಮಹಡಿ, ಪರಿಸರ ಭವನ, ಚರ್ಚ್‌ಸ್ಟ್ರೀಟ್, ಬೆಂಗಳೂರು, ಇಲ್ಲಿ, ನಡೆದ ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಣೆ ಕುರಿತಂತೆ ನಡೆಸಿದ ಸಭೆಯ ನಡವಳಿಯಂತೆ ತೆಗೆದುಕೊಳ್ಳಬೇಕಾಗಿರುವ ಮಾರ್ಗಸೂಚಿಗಳು**

ದಿನಾಂಕ 28/06/2022 ರಂದು ಹಿರಿಯ ಪರಿಸರ ಅಧಿಕಾರಿ, ಜಾಗೃತಿ ಮತ್ತು ತರಬೇತಿ ವಿಭಾಗ, ರವರು ಮಾನ್ಯ ಅಧ್ಯಕ್ಷರನ್ನು ಮತ್ತು ಸಭೆಗೆ ಹಾಜರಾಗಿದ್ದ ಸದಸ್ಯರುಗಳನ್ನು ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಣೆ ಕುರಿತಂತೆ ಆಯೋಜಿಸಲಾಗಿದ್ದ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ವಂದಿಸುತ್ತಾ ಈ ವರ್ಷದ ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಿಸಲು ತೆಗೆದುಕೊಳ್ಳಬೇಕಾಗಿರುವ ಕ್ರಮಗಳ ಮಾರ್ಗಸೂಚಿಯನ್ನು ವಿವರಿಸಿದರು.

1. ರಾಜ್ಯದಲ್ಲಿ ಜಲಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಮಂಡಳಿಯು ಪಿಓಪಿಯಿಂದ ಮಾಡುವ ವಿಗ್ರಹಗಳನ್ನು ಯಾವುದೇ ಜಲಮೂಲಗಳಿಗೆ ವಿಸರ್ಜನೆ ಮಾಡುವುದನ್ನು ನಿರ್ಬಂಧಿಸಿ ಅಧಿಸೂಚನೆಯನ್ನು ದಿನಾಂಕ 20/07/2016 ರಂದು ಹೊರಡಿಸಿದೆ.

2. ಮಾನ್ಯ ಉಚ್ಛ ನ್ಯಾಯಾಲಯವು ನೀಡಿರುವ ಆದೇಶದಲ್ಲಿ (W.P.No.927 to 931 of 2017 & 1322 of 2017, dated 31/01/2017) ಮಂಡಳಿಯು ಹೊರಡಿಸಿದ ಅಧಿಸೂಚನೆಯನ್ನು ಕ್ರಮಬದ್ಧಗೊಳಿಸಿದ್ದು, ಸದರಿ ಪ್ರತಿಯನ್ನು ಎಲ್ಲಾ ಜಿಲ್ಲಾಧಿಕಾರಿಗಳಿಗೆ, ಆಯುಕ್ತರು, ಬಿ.ಬಿ.ಎಂ.ಪಿ., ಬೆಂಗಳೂರು, ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ಮತ್ತು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ರವಾನಿಸಿ, ಸದರಿ ಅಧಿಸೂಚನೆಯಂತೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

3. ಸಾರ್ವಜನಿಕ ಹಿತಾಸಕ್ತಿ ಮತ್ತು ಜಲಮೂಲಗಳನ್ನು ಮಾಲಿನ್ಯದಿಂದ ರಕ್ಷಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಅಧೀನದಲ್ಲಿರುವ ಇಲಾಖೆಯಿಂದ ಸೂಕ್ತ ಕ್ರಮಕೈಗೊಳ್ಳುವ ಸಲುವಾಗಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಮಂಡಳಿಯಿಂದ ಪತ್ರ ಬರೆದು ಈ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

4. ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಈಗಾಗಲೇ ವಿಸರ್ಜಿಸದೆ ಉಳಿದಿರುವ ಪಿಓಪಿ ಅಥವಾ ಬಣ್ಣದ ವಿಗ್ರಹಗಳನ್ನು ತನಿಖೆ ಮಾಡಿ ತನ್ನ ಸುಪರ್ಧಿಗೆ ತೆಗೆದುಕೊಂಡು ಮತ್ತು ಅಂತಹ ವಸ್ತುಗಳನ್ನು ಸ್ಥಳೀಯ ಸಂಸ್ಥೆಗಳಲ್ಲಿ ಇರುವ ಘನ ತ್ಯಾಜ್ಯ ವಿಲೇವಾರಿ



ನಮ್ಮೆಲ್ಲರ ಚಿತ್ತ, ನೈಸರ್ಗಿಕ ಸಂಪನ್ಮೂಲಗಳ ಮಿತ ಬಳಕೆಯತ್ತ ;
ತ್ಯಾಜ್ಯ ಉತ್ಪಾದನೆಯನ್ನು ತಗ್ಗಿಸಿ

Our motto is to minimize waste generation through judicious use of natural resources

ಘಟಕಗಳಿಗೆ ಸಾಗಿಸಿ ಶ್ರೆಡರ್‌ಗಳನ್ನು ಉಪಯೋಗಿಸಿಕೊಂಡು ಒಂದೇ ಸ್ಥಳದಲ್ಲಿ (Landfill site) ವಿಲೇವಾರಿ ಮಾಡುವಂತೆ ಸೂಚಿಸಲಾಗಿರುತ್ತದೆ.

5. ರಾಜ್ಯದ ಜಿಲ್ಲೆ ಅಥವಾ ತಾಲ್ಲೂಕುಗಳಿಗೆ ಬೇರೆ ರಾಜ್ಯದಿಂದ ಬರುವಂತಹ ಪಿಓಪಿ ವಿಗ್ರಹಗಳನ್ನು ತಡೆಗಟ್ಟಲು ಸಂಬಂಧಿಸಿದ ಚೆಕ್‌ಪೋಸ್ಟ್ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಹಾಗೂ ಅಂತಹ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕಟ್ಟುನಿಟ್ಟಿನ ಕ್ರಮವನ್ನು ತೆಗೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿರುತ್ತದೆ.

6. ಪಿಓಪಿ ಮತ್ತು ರಸಾಯನಿಕ ಬಣ್ಣದ ವಿಗ್ರಹಗಳನ್ನು ತಯಾರಿಸಬಾರದೆಂದು ಹಾಗೂ ಯಾವುದೇ ಜಲಮೂಲಗಳಲ್ಲಿ ಅಂತಹ ವಿಗ್ರಹಗಳು ವಿಸರ್ಜನೆಯಾಗದ ರೀತಿಯಲ್ಲಿ ಎಲ್ಲಾ ಸ್ಥಳೀಯ ಸಂಸ್ಥೆಗಳಿಗೂ, ಗ್ರಾಮಗಳಿಗೂ ನಿರ್ದೇಶನ ನೀಡಲು ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿದೆ ಹಾಗೂ ಅಂತಹ ಉಲ್ಲಂಘನೆ ಮಾಡುವವರಿಗೆ IPC 1860 ಪ್ರಕಾರ ಕ್ರಮ ತೆಗೆದುಕೊಳ್ಳಬಹುದಾಗಿರುತ್ತದೆ ಎಂದು ತಿಳಿಸಲಾಗಿರುತ್ತದೆ.

7. ಮಂಡಳಿಯು ಸಂಬಂಧಪಟ್ಟ ತನ್ನ ಪ್ರಾದೇಶಿಕ ಅಧಿಕಾರಿಗಳು ಹಾಗೂ ಎಲ್ಲಾ ಇಲಾಖೆಗಳ ಅಧಿಕಾರಿಗಳ ಸಭೆಯನ್ನು ನಡೆಸಿ ಅಧಿಸೂಚನೆಯಂತೆ ಕ್ರಮವಹಿಸಲು ಹಾಗೂ ಪ್ಲಾಸ್ಟರ್ ಆಫ್ ಪ್ಯಾರೀಸ್ ಬದಲು ಬಣ್ಣರಹಿತ ಮಣ್ಣಿನ ಮೂರ್ತಿಗಳನ್ನು ತಯಾರಿಸುವಂತೆ ತಯಾರಕರಿಗೆ ಅಧಿಸೂಚನೆಯ ಬಗ್ಗೆ ವಿವರಿಸಿ ಕ್ರಮಕೈಗೊಳ್ಳಲು ತಿಳಿಸಲಾಗಿರುತ್ತದೆ.

8. ಇತ್ತೀಚಿಗೆ ದಿನಾಂಕ 18/06/2019 ರಂದು ಮಾನ್ಯ ಉಚ್ಛ ನ್ಯಾಯಾಲಯವು ಬಿ.ಬಿ.ಎಂ.ಪಿ ಮತ್ತು ಮಾ.ನಿ.ಮಂಡಳಿಗೆ POP ಗಣೇಶ ವಿಸರ್ಜನೆ ಕುರಿತಾಗಿ ನಿರ್ದೇಶಗಳನ್ನು ನೀಡಿ ಕಾನೂನು ಕ್ರಮ ಜರುಗಿಸಲು ಸೂಚಿಸಿದೆ.

ಈ ವರ್ಷವೂ ಸಹ "ಪರಿಸರ ಸ್ನೇಹಿ ಗಣೇಶ ಹಬ್ಬ-2022" ಆಚರಿಸುವ ಸಂಬಂಧ ತೆಗೆದುಕೊಳ್ಳಬೇಕಾದ ಕ್ರಮಗಳನ್ನು ಚರ್ಚಿಸಿ ಕೆಳಕಂಡಂತೆ ಕ್ರಮವಹಿಸಲು ಮಾನ್ಯ ಅಧ್ಯಕ್ಷರು ಸೂಚಿಸಿದರು.

1 ದಿನಾಂಕ 20.07.2016 ರ ಅಧಿಸೂಚನೆಯಲ್ಲಿ ತಿಳಿಸಿರುವಂತೆ POP ವಿಗ್ರಹಗಳನ್ನು ತಯಾರಿಸುವ ಮತ್ತು ಮಾರಾಟ ಮಾಡುವ ವ್ಯಕ್ತಿ/ಸಂಸ್ಥೆಗಳಿಗೆ ವ್ಯಾಪಾರ ಲೈಸನ್ಸ್ ನೀಡದಿರಲು ಮತ್ತು ಲೈಸೆನ್ಸ್ ಪಡೆಯದೇ ಅನಧಿಕೃತವಾಗಿ ತಯಾರಿ/ಮಾರಾಟ ಮಾಡುವ ವ್ಯಕ್ತಿ/ಸಂಸ್ಥೆಗಳ ಮೇಲೆ ಕಾನೂನು ಕ್ರಮವನ್ನು ತಕ್ಷಣ ಜರುಗಿಸುವುದು.

- ಬಿ.ಬಿ.ಎಂ.ಪಿ., ಪೋಲೀಸ್, ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಸರ್ಕಾರೇತರ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಬಿ.ಬಿ.ಎಂ.ಪಿ., ವಲಯ ಮಟ್ಟದಲ್ಲಿ ಸಮಿತಿಗಳನ್ನು ರಚಿಸಿ. ಆ ಸಮಿತಿಗಳ ಮೂಲಕ ಪಿಓಪಿ ಮೂರ್ತಿ ತಯಾರಿಸುವವರ ಮತ್ತು ಮಾರಾಟಗಾರರ ಮೇಲೆ ನಿಗಾವಹಿಸಿ ಕ್ರಮ ಜರುಗಿಸುವುದು.

ಸಮಿತಿಯು ಬಿ.ಬಿ.ಎಂ.ಪಿ., ವಲಯ ಜಂಟಿ ಆಯುಕ್ತರ ನೇತೃತ್ವದಲ್ಲಿ ಕೆಳಕಂಡ ಸದಸ್ಯರನ್ನು ಒಳಗೊಂಡಿರಬೇಕು.

1) ವಲಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ., ಕೇಂದ್ರ ಕಛೇರಿ- ಅಧ್ಯಕ್ಷರು
2) ಸಂಬಂಧಿಸಿದ ಪ್ರಾದೇಶಿಕ ಅಧಿಕಾರಿ, ಕ.ರಾ.ಮಾ.ನಿ.ಮಂ- ಸದಸ್ಯರು
3) ಪೋಲೀಸ್ ಇಲಾಖೆ ಪ್ರತಿನಿಧಿ- ಸದಸ್ಯರು
4) ಸರ್ಕಾರೇತರ ಸಂಘಗಳ ಪ್ರತಿನಿಧಿ (ಜಂಟಿ ಆಯುಕ್ತರು ನೇಮಿಸುವುದು)- ಸದಸ್ಯರು

- ನಗರದಲ್ಲಿ ಫ್ಲೆಕ್ಸ್, ಪ್ಲಾಸ್ಟಿಕ್, ಬ್ಯಾನರ್ಗಳ ಹಾವಳಿ ಕುರಿತಂತೆ ಸಾರ್ವಜನಿಕರು ಬಿ.ಬಿ.ಎಂ.ಪಿ/ರಾಜ್ಯದ ಇತರೆ ಸ್ಥಳೀಯ ಸಂಸ್ಥೆಗಳಿಗೆ ಮಾಹಿತಿ ನೀಡಲು ದೂರವಾಣಿ ಸಂಖ್ಯೆಗಳ ಮಾಹಿತಿಗಳನ್ನು ಸಾರ್ವಜನಿಕರಿಗೆ ಪ್ರಕಟಣೆ ಮುಖಾಂತರ ನೀಡಿರುತ್ತದೆ. ಸದರಿ ದೂರವಾಣಿ ಸಂಖ್ಯೆಗಳನ್ನು ಪಿಓಪಿ ಗಣೇಶ ತಯಾರಿಕೆ ಮತ್ತು ಮಾರಾಟ ಮಾಡುವವರ ಮಾಹಿತಿ ನೀಡಲು ಸಹ ಬಳಸಬಹುದೆಂಬ ಅಭಿಪ್ರಾಯ ಪಡೆಯಲಾಯಿತು. ಈ ಕುರಿತಂತೆ ಬಿ.ಬಿ.ಎಂ.ಪಿ/ರಾಜ್ಯದ ಇತರೆ ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಪ್ರಕಟಣೆ ನೀಡುವಂತೆ ತಿಳಿಸಲಾಯಿತು.
- 2019ನೇ ಸಾಲಿನಲ್ಲಿ ಪೋಲೀಸ್ ಇಲಾಖೆ ನೀಡಿರುವ ಲೈಸನ್ಸ್‌ಗಳ ವಿವರಗಳನ್ನು ಬಿ.ಬಿ.ಎಂ.ಪಿ., ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿಗೆ ನೀಡುವಂತೆ ಸಭೆಯಲ್ಲಿ ಹಾಜರಿದ್ದ ಪೋಲೀಸ್ ಇಲಾಖೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು.
  ಈ ರೀತಿ ಪಡೆದ ವಿವರಗಳನ್ನು ಬಳಸಿಕೊಂಡು ಸಾರ್ವಜನಿಕ ಗಣೇಶ ಸ್ಥಾಪಿಸುವ ಸಂಘ/ಸಂಸ್ಥೆಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲು ಬಿ.ಬಿ.ಎಂ.ಪಿ., ರವರಿಗೆ ತಿಳಿಸಲಾಯಿತು.

2 ಸಾರಿಗೆ ಇಲಾಖೆ ಅಧಿಕಾರಿಗಳು ಬೇರೆ ಊರುಗಳಿಂದ ಮತ್ತು ರಾಜ್ಯಗಳಿಂದ ಬರುವಂತಹ ಪಿಓಪಿ ವಿಗ್ರಹಗಳನ್ನು ತಡೆಗಟ್ಟಲು ಚೆಕ್‌ಪೋಸ್ಟ್ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ತಿಳಿಸಲಾಯಿತು.

3 ಗೌರಿಗಣೇಶ ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕರು ಬಣ್ಣರಹಿತ ಮಣ್ಣಿನ ಗಣೇಶ ಮೂರ್ತಿಗಳೊಂದಿಗೆ ಹಬ್ಬ ಆಚರಿಸಿ ತದನಂತರ ಸ್ಥಳೀಯ ಸಂಸ್ಥೆಗಳು ನಿಗಧಿಪಡಿಸಿದ ಸ್ಥಳಗಳಲ್ಲಿಯೇ ಮೂರ್ತಿಗಳನ್ನು ವಿಸರ್ಜಿಸುವುದು.

4 ಮಣ್ಣಿನ ಗಣೇಶ ಮೂರ್ತಿಗಳ ವಿಸರ್ಜನೆ ಸಂದರ್ಭದಲ್ಲಿ ಮೊಬೈಲ್ ಟ್ಯಾಂಕ್‌ಗಳಲ್ಲಿ/ಕಲ್ಯಾಣಿಗಳ ಪಕ್ಕದಲ್ಲಿ ಹಸಿ ಕಸ (ಹೂವು, ಹಣ್ಣು, ಬಾಳೆಕಂಬ, ಮಾವಿನ ತೋರಣ, ಇತ್ಯಾದಿ) ಪ್ರತ್ಯೇಕಿಸಿ ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೆ ಪ್ರತ್ಯೇಕವಾಗಿ ವಿಲೇವಾರಿ ಮಾಡಲು ಕ್ರಮವಹಿಸುವುದು.

5 ವಿಶೇಷವಾಗಿ ಬೆಂಗಳೂರು ನಗರದಲ್ಲಿ ಕೆರೆಗಳನ್ನು/ಕಲ್ಯಾಣಿಗಳನ್ನು ಪ್ರತಿ ವಾರ್ಡ್‌ನಲ್ಲಿ ಗುರುತಿಸಿ ಮೂರ್ತಿಗಳ ವಿಸರ್ಜನೆಗೆ ಕ್ರಮವಹಿಸುವುದು.

6 ವಾರ್ಡ್ ಮಟ್ಟದಲ್ಲಿ ಪೋಲೀಸರ ಸಹಯೋಗದೊಂದಿಗೆ ಸಮಿತಿಗಳನ್ನು ರಚಿಸಿ ಗಣೇಶ ವಿಗ್ರಹಗಳ ಸೂಕ್ತ ವಿಲೇವಾರಿಗೆ ಕ್ರಮಕೈಗೊಳ್ಳುವುದು.

7 ಗರಿಷ್ಠ 5 ಅಡಿ ಎತ್ತರದ ಮಣ್ಣಿನ ವಿಗ್ರಹಗಳನ್ನು ಮಾತ್ರ ತಯಾರಿಸಲು ಅನುಮತಿ ನೀಡುವುದು. (ಮೂರ್ತಿಗಳ ಸರಾಸರಿ ತೂಕ, ಬಿರುಕು, ಸಾಗಾಣಿಕೆ ಹಾಗೂ ತ್ಯಾಜ್ಯ ಉತ್ಪನ್ನ ಪರಿಗಣಿಸಿ ಈ ಕ್ರಮ ಶಿಫಾರಸ್ಸು ಮಾಡಲಾಗಿದೆ).

8 ಸಾರ್ವಜನಿಕವಾಗಿ ಇಡಲಾಗುವ ಗಣೇಶ ವಿಗ್ರಹಗಳನ್ನು ಪ್ರತಿ ಸಮಿತಿಯವರು ಕಡ್ಡಾಯವಾಗಿ ಬಿ.ಬಿ.ಎಂ.ಪಿ/ಇತರೆ ಸ್ಥಳೀಯ ಸಂಸ್ಥೆಗಳು ಮತ್ತು ಪೋಲೀಸ್ ಇಲಾಖೆಯಿಂದ ನಿಬಂಧನೆಗೊಳ್ಳಪಟ್ಟ ಅನುಮತಿಗಳನ್ನು ಪಡೆದ ನಂತರವೇ ಸ್ಥಾಪಿಸುವುದು. ಈ ಅನುಮತಿ ಪತ್ರಗಳಲ್ಲಿ ಲೈಸನ್ಸ್ ನೀಡುವ ಸಂದರ್ಭಗಳಲ್ಲಿ ಪ್ಲಾಸ್ಟಿಕ್ ಫ್ಲೆಕ್ಸ್ ಮತ್ತೀತರ ವಸ್ತುಗಳ ಬಳಕೆ ನಿಷೇಧಿಸುವುದು ಹಾಗೂ ರಾತ್ರಿ 10.00 ರಿಂದ ಬೆಳಗ್ಗೆ 6.00 ಗಂಟೆಯ ತನಕ ಧ್ವನಿವರ್ಧಕಗಳ ಬಳಕೆ ನಿಷೇಧಿಸುವುದು.

9 ನಿರ್ದಿಷ್ಠ ಪ್ರದೇಶದಲ್ಲಿ ಸ್ಥಾಪಿಸಲಾಗುವ ಸಾರ್ವಜನಿಕ ಗಣಪತಿಗಳನ್ನು ವಿಲೇವಾರಿ ಮಾಡಲು ನಿರ್ದಿಷ್ಠ ಜಲಮೂಲಗಳನ್ನು ನಿಗಧಿಪಡಿಸುವುದು ಮತ್ತು ಈ ಬಗ್ಗೆ ಸೂಕ್ತ ಪ್ರಕಟಣೆಯನ್ನು ಹೊರಡಿಸುವುದು.

10 ಯಾವುದೇ ಕಾರಣಕ್ಕೂ ತಿಂಗಳುಗಳವರೆಗೆ ಗಣೇಶನನ್ನು ಕೂರಿಸುವುದನ್ನು ಮತ್ತು ವಿಲೇವಾರಿ ಮಾಡುವುದನ್ನು ನಿರ್ಬಂಧಿಸುವುದು.

11 ಶಾಲಾ ಕಾಲೇಜುಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಬಿ.ಬಿ.ಎಂ.ಪಿ/ಇತರೆ ಸ್ಥಳೀಯ ಸಂಸ್ಥೆಗಳು ಮತ್ತು ಕ.ರಾ.ಮಾ.ನಿ.ಮಂ., ಅಧಿಕಾರಿಗಳಿಗೆ ಸೂಚಿಸಲಾಯಿತು.

12 ಹಬ್ಬಕ್ಕೆ ಮುಂಚಿತವಾಗಿ ಮತ್ತು ನಂತರ ಗಣೇಶ ವಿಸರ್ಜನಾ ಕೆರೆ, ನದಿಗಳ ನೀರನ್ನು ಪರೀಕ್ಷಿಸಲು ಅಧಿಕಾರಿಗಳಿಗೆ ತಿಳಿಸಲಾಯಿತು.

13 ಪಿಓಪಿ ಅಥವಾ ಬಣ್ಣವನ್ನು ಬಳಸಿದ ಮೂರ್ತಿಗಳನ್ನು ನೇರವಾಗಿ ಕೆರೆ, ಹೊಂಡ, ನದಿಗಳಿಗೆ ಬಿಡದೆ ಮೂರ್ತಿಗಳನ್ನು ವಿಸರ್ಜಿಸಲು ಕಲ್ಯಾಣಿಗಳು ಅಥವಾ ತಾತ್ಕಾಲಿಕ ಹೊಂಡಗಳನ್ನು ಅತಿ ಹೆಚ್ಚು ಕಡೆ ನಿರ್ಮಿಸಿ ಅದರಲ್ಲಿ ಮೂರ್ತಿಗಳನ್ನು ವಿಸರ್ಜಿಸುವುದು.

14 ಸಾರ್ವಜನಿಕ ಗಣೇಶ ಉತ್ಸವ ಆಚರಿಸಲು ಸಮಿತಿಗಳು ಮಾಹಿತಿ ಸಂಗ್ರಹಿಸಲು ಮತ್ತು ಪರವಾನಿಗೆ ಪಡೆಯಲು ಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶನ ನೀಡುವುದು.

15 ಬಿಬಿಎಂಪಿ ವ್ಯಾಪ್ತಿಯ ಎಲ್ಲಾ ಕೆರೆಗಳ ಬಳಿ ಕಲ್ಯಾಣಗಳ ದುರಸ್ತಿ ಮತ್ತು ಹೆಚ್ಚು ಕಡೆಗಳಲ್ಲಿ ತಾತ್ಕಾಲಿಕವಾಗಿ ಕಲ್ಯಾಣಿಗಳನ್ನು ನಿರ್ಮಿಸಿ ವಿಸರ್ಜನೆಗೆ ಅನುಕೂಲ ಮಾಡುವುದು. ವಿಸರ್ಜಿಸಿದ ಮೂರ್ತಿಗಳನ್ನು ಸಂಗ್ರಹಿಸಿ ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡುವುದು.

16 ಉತ್ಸವ ಆಚರಿಸಲು ಬೇಕಾದ ಪೂರ್ವ ತಯಾರಿಗೆ ಸಂಬಂಧಿಸಿದಂತೆ ಪೋಲೀಸ್, ಸ್ಥಳೀಯ ಸಂಸ್ಥೆಗಳಿಂದ ಅನುಮೋದನೆ ಪಡೆಯುವುದು. ನಿಯಮಾನುಸಾರ ಧ್ವನಿವರ್ಧಕಗಳನ್ನು ಬಳಸಲು ಪೋಲೀಸ್ ಇಲಾಖೆಯಿಂದ ಪೂರ್ವಾನುಮತಿ ಪಡೆಯುವುದು.

17 ಉತ್ಸವ ಮೂರ್ತಿ ಬಿಡುವ ಕೆರೆ, ಕಲ್ಯಾಣಿ ಮತ್ತು, ಸ್ಥಳದಲ್ಲಿ ಅಗತ್ಯ ವ್ಯವಸ್ಥೆಗಳಾದ ಬೆಳಕು, ರಕ್ಷಣೆ, ಸಹಾಯಕ ಸಿಬ್ಬಂದಿಗಳು, ಕುಡಿಯುವ ನೀರು, ಶೌಚಾಲಯ, ಸಾಲಾಗಿ ಬರಲು ಬ್ಯಾರಿಕೇಡ್ ವ್ಯವಸ್ಥೆ, ರಸ್ತೆ ಸಂಚಾರ ನಿಯಂತ್ರಣ, ಸೂಚನೆಗಳನ್ನು ನೀಡಲು ಧ್ವನಿವರ್ಧಕ ವ್ಯವಸ್ಥೆ, ಅಂಬುಲೆನ್ಸ್ ಮತ್ತು ಪ್ರಥಮ ಚಿಕಿತ್ಸೆ, ದೊಡ್ಡ ಗಣಪತಿಗಳನ್ನು ನಿಮಜ್ಜಿಸಲು ಕಲೆಯ ಕಲ್ಯಾಣಿಗಳಲ್ಲಿ ನೀರಿನ ವ್ಯವಸ್ಥೆ, ಬೃಹತ್ ಕ್ರೇನ್‌ಗಳು, ಕಾಲ ಕಾಲಕ್ಕೆ ಕಲ್ಯಾಣಿಗಳ ಸ್ವಚ್ಛತೆಗಾಗಿ ಜೆಸಿಬಿಗಳು, ತುರ್ತು ನಿರ್ವಹಣಾ ಸುರಕ್ಷಾ ಪಡೆಗಳ ವ್ಯವಸ್ಥೆ ಕೈಗೊಳ್ಳುವುದು.

ಮೇಲೆ ತಿಳಿಸಿರುವ ಎಲ್ಲಾ ಸೂಚನೆಗಳನ್ನು ಎಲ್ಲಾ ಮಹಾನಗರ ಪಾಲಿಕೆಗಳು, ಸ್ಥಳೀಯ ಸಂಸ್ಥೆಗಳು ಅನುಸರಿಸಬೇಕೆಂದು ತಿಳಿಸಲಾಯಿತು. ಸಭೆಯಲ್ಲಿ ಹಾಜರಿದ್ದ ಪೌರಾಡಳಿತ ನಿರ್ದೇಶನಾಲಯದ ಅಧಿಕಾರಿಗಳಿಗೆ ಕೂಡಲೇ ಎಲ್ಲಾ ಸಂಬಂಧಿಸಿದವರಿಗೆ ನಿರ್ದೇಶನ ನೀಡುವಂತೆ ತಿಳಿಸಿದರು.

ಸದಸ್ಯ ಕಾರ್ಯದರ್ಶಿ
**ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ**

**ಇವರಿಗೆ,**

1. ಆಯುಕ್ತರು, ಬಿ.ಬಿ.ಎಂ.ಪಿ., ಎನ್.ಆರ್.ವೃತ್ತ, ನರಸಿಂಹರಾಜ ರಸ್ತೆ, ಬೆಂಗಳೂರು-02.
2. ಆಯುಕ್ತರು, ಬೆಂಗಳೂರು ನಗರ ಪೋಲೀಸ್, ನಂ.01, ಇನ್‌ಫ್ಯಾಂಟ್ರಿ ರಸ್ತೆ (ಸ್ಪರ್ಶ್ ಹಾಸ್ಪಿಟಲ್ ಹತ್ತಿರ), ಬೆಂಗಳೂರು-01.
3. ಆಯುಕ್ತರು, ಸಾರಿಗೆ ಇಲಾಖೆ, ನಂ.222, 2ನೇ ಮಹಡಿ, ಬಿ.ಎಂ.ಟಿ.ಸಿ., ಕಟ್ಟಡ, ಸೆಂಟ್ರಲ್ ಕಛೇರಿಗಳು (ಬಿಗ್ ಬಜ್ಹಾರ್ ಹತ್ತಿರ), ಶಾಂತಿನಗರ, ಬೆಂಗಳೂರು-27.
4. ಆಯುಕ್ತರು, ಎಲ್ಲಾ ಮಹಾನಗರ ಪಾಲಿಕೆಗಳು, ರವರ ಮಾಹಿತಿಗಾಗಿ, ಸ್ಥಳೀಯ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಕ್ಕಾಗಿ ಕೋರಿಕೆ.
5. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, 7ನೇ ಮಹಡಿ, ವಿ.ವಿ.ಟವರ್, ಡಾ|| ಅಂಬೇಡ್ಕರ್ ರಸ್ತೆ, ಬೆಂಗಳೂರು, ರವರ ಮಾಹಿತಿಗಾಗಿ, ಸ್ಥಳೀಯ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಕ್ಕಾಗಿ ಕೋರಿಕೆ.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
7. ಎಲ್ಲಾ ಮುಖ್ಯ ಪರಿಸರ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ.
8. ಎಲ್ಲಾ ಪ್ರಾದೇಶಿಕ ಹಿರಿಯ ಪರಿಸರ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ.
9. ಎಲ್ಲಾ ಪ್ರಾದೇಶಿಕ ಅಧಿಕಾರಿಗಳು, ಕ.ರಾ.ಮಾ.ನಿ.ಮಂ, ರವರ ಮಾಹಿತಿಗಾಗಿ ಹಾಗೂ ಗಣೇಶ ಹಬ್ಬದ ಪೂರ್ವ ಹಾಗೂ ನಂತರ ಕನಿಷ್ಠ 06 ಜಲಮಾದರಿಗಳನ್ನು ಮಂಡಳಿಯ ಕೇಂದ್ರ ಪ್ರಯೋಗಾಲಯವು ನಿಗಧಿಪಡಿಸಿದ ದಿನಾಂಕದಂದು ಸಂಗ್ರಹಿಸಿ ಸಲ್ಲಿಸುವುದು.
10. ಇತರೆ.

**ಪ್ರತಿಯನ್ನು:**

1) ಸರ್ಕಾರದ ಕಾರ್ಯದರ್ಶಿಗಳು, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು, ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು,